# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ; 653
2. ವಿಧಾನ ಪರಿಷತ್ತ ಸದಸ್ಯರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
3. ಉತ್ತರಿಸ ಬೇಕಾದ ದಿನಾಂಕ : 04.03.2021
4. ಉತ್ತರಿಸ ಬೇಕಾದ ಸಚಿವರು : ಮುಖ್ಯ ಮಂತ್ರಿ

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕೋವಿಡ್–19ರ ಪ್ರಯುಕ್ತ, ಎಲ್ಲಾ ನೇಮಕಾತಿಗಳಿಗೂ ಆರ್ಥಿಕ ಮಿತವ್ಯಯ ಹೇರಿರುವುದು ನಿಜವೇ; ಹಾಗಿದ್ದಲ್ಲಿ ಈ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು; | ರಾಜ್ಯದಲ್ಲಿ ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಮತ್ತು ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವುದು ಅನಿವಾರ್ಯವಾಗಿರುವುದರಿಂದ, ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ–8 2020, ದಿನಾಂಕ:10.06.2020 ಹಾಗೂ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ ಎಲ್ಲಾ ಶಾಲಾ ಕಾಲೇಜುಗಳಲ್ಲಿನ ಎಲ್ಲಾ ಹಂತದ ನೇಮಕಾತಿಯನ್ನು ತಡೆಹಿಡಿಯಲಾಗಿರುತ್ತದೆ.<br><br>ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದ ನಂತರ ಮೇಲ್ಕಂಡ ಸುತ್ತೋಲೆಗಳನ್ನು ಹಿಂಪಡೆಯುವ ಬಗ್ಗೆ ಪರಿಶೀಲಿಸಲಾಗುವುದು. |
| (ಆ) | ಆರ್ಥಿಕ ಇಲಾಖೆಯು ರಾಜ್ಯದಲ್ಲಿ 1995ರ ನಂತರ ಪ್ರಾರಂಭವಾದ ಎಲ್ಲಾ ವರ್ಗದ ಅರ್ಹ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಇರುವ ತೊಂದರೆಗಳೇನು? (ವಿವರವಾದ ಮಾಹಿತಿ ನೀಡುವುದು) | ರಾಜ್ಯದಲ್ಲಿ 1994–95ರ ನಂತರ ಪ್ರಾರಂಭವಾದ ಶಾಶ್ವತ ಅನುದಾನರಹಿತ ಶಾಲಾ ಕಾಲೇಜುಗಳಿಗೆ ವೇತನಾನುದಾನ ವಿಸ್ತರಿಸುವ ಕುರಿತು ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |
| (ಇ) | ಯಾವ ಕಾಲಮಿತಿಯೊಳಗೆ ಸರ್ಕಾರ ಈ ಶಾಲಾ ಕಾಲೇಜುಗಳಿಗೆ ಅನುದಾನ ನೀಡುವುದು? (ವಿವರವಾದ ಮಾಹಿತಿ ನೀಡುವುದು) | (ಆ) ರಲ್ಲಿನ ಉತ್ತರದಿಂದಾಗಿ ಉದ್ಭವಿಸುವುದಿಲ್ಲ. |

ಬಿ.ಎಸ್. ಯಡಿಯೂರಪ್ಪ

ಸಂಖ್ಯೆ:ಆಇ 47 ವೆಚ್ಚ–8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ